ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು – 575 001.

ಕರ್ನಾಟಕ ಸರಕಾರ

(ಕಂದಾಯ ಇಲಾಖೆ)

Deputy Commissioner & District Magistrate's Office, Dakshina Kannada District, Mangaluru – 575 001.

ನಂ.ಎಂಎಜಿ(2)ಸಿಆರ್. 156/2021/133465/ಸಿ4/17 ದಿನಾಂಕ: 20-06-2021

# ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರ ನಡವಳಿ

ವಿಷಯ: ಜಿಲ್ಲೆಯಲ್ಲಿ ಕೋವಿಡ್-19 ಸೋಂಕು ಪ್ರಸರಣದ ಸರಪಳಿಯನ್ನು ತುಂಡರಿಸಲು ಮಾರ್ಗಸೂಚಿಗಳನ್ನು ಮುಂದುವರೆಸಿ ಆದೇಶ

ಉಲ್ಲೇಖ: 1) ಸರ್ಕಾರದ ಆದೇಶ ಸಂ: ಕಂಇ 158 ಟಿಎನ್ ಆರ್ 2020 ದಿನಾಂಕ: 11-06-2021

2) ಈ ಕಛೇರಿ ಆದೇಶ ಸಂ: ಎಂಎಜಿ(2)ಸಿಆರ್ 156/2021/133465/ಸಿ4/9 ದಿನಾಂಕ: 09-05-2021

3) ಈ ಕಛೇರಿ ಆದೇಶ ಸಂ: ಎಂಎಜಿ(2)ಸಿಆರ್ 156/2021/133465/ಸಿ4/15 ದಿನಾಂಕ: 11-06-2021

4) ಸರ್ಕಾರದ ಆದೇಶ ಸಂ: ಕಂಇ 158 ಟಿಎನ್ ಆರ್ 2020 ದಿನಾಂಕ: 19-06-2021

=======@=======

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋವಿಡ್-19 (ಕೊರೊನಾ ವೈರಾಣು ಕಾಯಿಲೆ - 2019) ನಿಯಂತ್ರಣಕ್ಕೆ ಸಂಬಂಧಿಸಿದಂತೆ ಜಿಲ್ಲಾಡಳಿತವು ಸರ್ಕಾರದ ನಿರ್ದೇಶನದಂತೆ ಕಾಲಕಾಲಕ್ಕೆ ಎಲ್ಲಾ ಅವಶ್ಯಕ ಕ್ರಮಗಳನ್ನು ಕೈಗೊಳ್ಳುತ್ತಿದ್ದು ಕಟ್ಟುನಿಟ್ಟಿನ ನಿರ್ಬಂಧಗಳ ಪರಿಣಾಮಕಾರಿ ಅನುಷ್ಠಾನದಿಂದಾಗಿ ಕೋವಿಡ್ ಪ್ರಕರಣಗಳ ಸಂಖ್ಯೆ ಇಳಿಕೆಯಾಗಿದ್ದರೂ ಸಹ ಪ್ರಸ್ತುತ ಜಿಲ್ಲೆಯ ಪಾಸಿಟಿವಿಟಿ ದರವು ಶೇಕಡಾ 5 ಕ್ಕಿಂತ ಹೆಚ್ಚಿರುತ್ತದೆ.

ಪ್ರಸ್ತುತ ಜಿಲ್ಲೆಯಲ್ಲಿ ಸರ್ಕಾರದ ಉಲ್ಲೇಖ(1) ರ ಆದೇಶದನ್ವಯ ಉಲ್ಲೇಖ(2) ಮತ್ತು (3)ರಂತೆ ದಿನಾಂಕ: 21-06-2021ರವರೆಗೆ ಕೋವಿಡ್ ನಿಯಂತ್ರಣಕ್ಕಾಗಿ ಮಾರ್ಗಸೂಚಿಗಳು ಜಾರಿಯಲ್ಲಿದ್ದು, ಜಿಲ್ಲೆಗಳ ಕೋವಿಡ್ ಪಾಸಿಟಿವಿಟಿ ದರದ ಆಧಾರದ ಮೇಲೆ, ಕೋವಿಡ್ ನಿಯಂತ್ರಣಕ್ಕಾಗಿ ಈವರೆಗೆ ತೆಗೆದುಕೊಳ್ಳಲಾದ ಎಲ್ಲಾ ಕಟ್ಟುನಿಟ್ಟಿನ ಕ್ರಮಗಳಿಂದ ಸಾಧಿಸಲಾದ ಗಣನೀಯ ಲಾಭವನ್ನು ಕಾಪಾಡಿಕೊಳ್ಳಲು ಎಲ್ಲಾ ಮುನ್ನೆಚ್ಚರಿಕೆಗಳನ್ನು ತೆಗೆದುಕೊಂಡು ಹಂತ ಹಂತವಾಗಿ ಕೆಲವೊಂದು ಪ್ರಮುಖ ಆರ್ಥಿಕ ಮತ್ತು ಇತರ ಚಟುವಟಿಕೆಗಳಿಗೆ ಅನುಮತಿ ನೀಡಿ, ಸರ್ಕಾರವು ಉಲ್ಲೇಖ(4)ರ ಆದೇಶದಲ್ಲಿ ದಿನಾಂಕ: 05-07-2021ರವರೆಗಿನ ಮಾರ್ಗಸೂಚಿಗಳನ್ನು ಹೊರಡಿಸಿರುತ್ತದೆ.

ಆದ್ದರಿಂದ ಸರ್ಕಾರದ ಉಲ್ಲೇಖ(4)ರ ಆದೇಶ ಹಾಗೂ ಜಿಲ್ಲೆಯ ಪ್ರಸ್ತುತ ವಿದ್ಯಮಾನಗಳನ್ನು ಪರಿಗಣಿಸಿ, ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಡಾ. ರಾಜೇಂದ್ರ ಕೆ.ವಿ, ಭಾ.ಆ.ಸೇ., ಜಿಲ್ಲಾಧಿಕಾರಿ, ಜಿಲ್ಲಾ ದಂಡಾಧಿಕಾರಿ ಹಾಗೂ ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಆದ ನಾನು ವಿಪತ್ತು ನಿರ್ವಹಣಾ ಕಾಯ್ದೆ 2005ರ ಕಲಂ 34 ಹಾಗೂ ದಂಡ ಪ್ರಕ್ರಿಯಾ ಸಂಹಿತೆ 1973 ರ ಕಲಂ 144 (3), ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಗಿನಂತೆ ಆದೇಶ ಹೊರಡಿಸಿರುತ್ತೇನೆ.

## ಆದೇಶ

A. ಜಿಲ್ಲೆಯಾದ್ಯಂತ ಸಂಜೆ 7.00 ಗಂಟೆಯಿಂದ ಬೆಳಗ್ಗೆ 7.00 ಗಂಟೆಯವರೆಗೆ ಅನುಬಂಧ -**A** ರಲ್ಲಿನ ಮಾರ್ಗಸೂಚಿಗಳಂತೆ ಕಟ್ಟುನಿಟ್ಟಿನ ರಾತ್ರಿ ಕರ್ಫ್ಯೂ ಜಾರಿಯಲ್ಲಿರುತ್ತದೆ.

B. ಜಿಲ್ಲೆಯಾದ್ಯಂತ ಶುಕ್ರವಾರ ಸಂಜೆ 7.00 ಗಂಟೆಯಿಂದ ಸೋಮವಾರ ಬೆಳಗ್ಗೆ 7.00 ಗಂಟೆಯವರೆಗೆ ಅನುಬಂಧ-**B** ರಲ್ಲಿನ ಮಾರ್ಗಸೂಚಿಗಳನ್ವಯ ಕಟ್ಟುನಿಟ್ಟಿನ ವಾರಾಂತ್ಯದ ಕರ್ಫ್ಯೂ ಜಾರಿಯಲ್ಲಿರುತ್ತದೆ.

C. ಜಿಲ್ಲೆಯಲ್ಲಿ ಬಸ್ ಸಂಚಾರಕ್ಕೆ ಅನುಮತಿಯಿರುವುದಿಲ್ಲ

ಕೋವಿಡ್-19 ಸೋಂಕು ಪ್ರಸರಣದ ಸರಪಳಿಯನ್ನು ಮುರಿಯಲು ಜಿಲ್ಲೆಯಲ್ಲಿ ಈಗಾಗಲೇ ಜಾರಿಯಲ್ಲಿರುವ ಉಲ್ಲೇಖ(2), (3) ಹಾಗೂ ಸೇರ್ಪಡೆ ಆದೇಶಗಳನ್ನು ಯಥಾವತ್ತಾಗಿ ದಿನಾಂಕ: 05-07-2021 ರ ಪೂರ್ವಾಹ್ನ 5.00 ಗಂಟೆಯವರೆಗೆ ಮುಂದುವರಿಸಲಾಗಿದೆ ಹಾಗೂ ಈ ಕೆಳಕಂಡ ಹೆಚ್ಚುವರಿ ಚಟುವಟಿಕೆಗಳನ್ನು ಅನುಮತಿಸಲಾಗಿದೆ.

1. ಕೋವಿಡ್ ಸಮುಚಿತ ವರ್ತನೆಯನ್ನು ಕಟ್ಟುನಿಟ್ಟಾಗಿ ಪಾಲಿಸಿಕೊಂಡು, ಎಲ್ಲಾ ಉತ್ಪಾದನಾ ಘಟಕಗಳು / ಸ್ಥಾಪನೆ / ಕೈಗಾರಿಕೆಗಳು ತಮ್ಮ ಸಿಬ್ಬಂದಿ ಸಾಮರ್ಥ್ಯದ 50% ರಷ್ಟು ಸಿಬ್ಬಂದಿಗಳೊಂದಿಗೆ ಕಾರ್ಯಾಚರಿಸಲು ಅನುಮತಿಸಲಾಗಿದೆ. ಆದಾಗ್ಯೂ ಉಡುಪು ತಯಾರಿಕೆಯಲ್ಲಿ ತೊಡಗಿರುವ ಘಟಕಗಳು / ಸಂಸ್ಥೆಗಳು / ಕೈಗಾರಿಕಗಳು ತಮ್ಮ ಸಿಬ್ಬಂದಿ ಸಾಮರ್ಥ್ಯದ 30% ರಷ್ಟು ಸಿಬ್ಬಂದಿಗಳೊಂದಿಗೆ 'ಕೋವಿಡ್ ಸಮುಚಿತ ವರ್ತನೆಯನ್ನು ಕಟ್ಟುನಿಟ್ಟಾಗಿ ಪಾಲಿಸಿಕೊಂಡು ಕಾರ್ಯಾಚರಿಸಲು ಅನುಮತಿಸಲಾಗಿದೆ.

2. ಕೋವಿಡ್ ಸಮುಚಿತ ವರ್ತನೆಯನ್ನು ಕಟ್ಟುನಿಟ್ಟಾಗಿ ಪಾಲಿಸಿಕೊಂಡು ಬೆಳಿಗ್ಗೆ 7 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಕಾರ್ಯನಿರ್ವಹಿಸಲು ಈ ಕೆಳಕಂಡ ಚಟುವಟಿಕೆಗಳಿಗೆ ಅನುಮತಿಸಿದೆ.
   i. ಆಹಾರ, ದಿನಸಿ, ಹಣ್ಣುಗಳು ಮತ್ತು ತರಕಾರಿಗಳು, ಮಾಂಸ ಮತ್ತು ಮೀನು, ಡೈರಿ ಮತ್ತು ಹಾಲಿನ ಬೂತ್‌ಗಳು ಮತ್ತು ಪ್ರಾಣಿಗಳ ಮೇವನ್ನು ಮಾರಾಟ ಮಾಡುವ ಅಂಗಡಿಗಳು.
   ii. ಬೀದಿಬದಿ ವ್ಯಾಪಾರಸ್ಥರು.
   iii. ಸಾರ್ವಜನಿಕ ವಿತರಣಾ ವ್ಯವಸ್ಥೆಯ ಪಡಿತರ ಅಂಗಡಿಗಳು.
   iv. ಸ್ವತಂತ್ರ ಮದ್ಯದಂಗಡಿಗಳು ಮತ್ತು ಮಳಿಗೆಗಳು ಪಾರ್ಸೆಲ್ ಕೊಂಡು ಹೋಗಲು ಮಾತ್ರವೇ ಅವಕಾಶ ನೀಡಿದೆ.

ಮನೆಯಿಂದ ಸಾರ್ವಜನಿಕರು ಹೊರಬರುವುದನ್ನು ಕಡಿಮೆ ಮಾಡಲು ಕೋವಿಡ್ ನಿರ್ವಹಣೆಗಾಗಿರುವ ರಾಷ್ಟ್ರೀಯ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಿಕೊಂಡು ಎಲ್ಲಾ ವಸ್ತುಗಳ 24x7 ಹೋಂ ಡೆಲಿವರಿ ಸೇವೆಗಳನ್ನು ಪ್ರೋತ್ಸಾಹಿಸಲಾಗುವುದು.

3. ಸಿಮೆಂಟ್, ಸ್ಟೀಲ್ ಸೇರಿದಂತೆ ಕಟ್ಟಡ ನಿರ್ಮಾಣ ಸಾಮಗ್ರಿಗಳನ್ನು ವ್ಯಾಪಾರ ಮಾಡುವ ಅಂಗಡಿಗಳು / ಸಂಸ್ಥೆಗಳು ಸೇರಿದಂತೆ, ಎಲ್ಲಾ ಕಟ್ಟಡ ನಿರ್ಮಾಣ ಚಟುವಟಿಕೆಗಳು / ದುರಸ್ತಿ ಕಾರ್ಯಗಳನ್ನು ಕೋವಿಡ್ ಸಮುಚಿತ ವರ್ತನೆಯನ್ನು ಕಡ್ಡಾಯವಾಗಿ ಪಾಲಿಸಿಕೊಂಡು ನಡೆಸಲು ಅನುಮತಿಸಲಾಗಿದೆ.

4. ಟ್ಯಾಕ್ಸಿ ಮತ್ತು ಆಟೋರಿಕ್ಷಾಗಳು ಕಾರ್ಯನಿರ್ವಹಿಸಬಹುದಾಗಿದ್ದು, ಗರಿಷ್ಠ ಇಬ್ಬರು ಪ್ರಯಾಣಿಕರನ್ನು ಮಾತ್ರವೇ ಕರೆದೊಯ್ಯಲು ಅನುಮತಿಸಲಾಗಿದೆ.

5. ಈಗಾಗಲೇ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಕಛೇರಿಗಳೊಂದಿಗೆ ಈ ಕೆಳಕಂಡ ಕಛೇರಿಗಳೂ ಕೂಡಾ ಶೇಕಡಾ 50ರಷ್ಟು ಸಿಬ್ಬಂದಿಗಳೊಂದಿಗೆ ಕಾರ್ಯ ನಿರ್ವಹಿಸಲು ಅನುಮತಿಸಲಾಗಿದೆ.
   i. ಕೃಷಿ ಮತ್ತು ಸಂಬಂಧಿತ ಕಛೇರಿಗಳು.
   ii. ಲೋಕೋಪಯೋಗಿ ಇಲಾಖೆ
   iii. ವಸತಿ
   iv. ಪ್ರಾದೇಶಿಕ ಸಾರಿಗೆ ಕಛೇರಿಗಳು.
   v. ಸಹಕಾರ ಮತ್ತು ನಬಾರ್ಡ್
   vi. ಭಾರತ ಸರ್ಕಾರದ ಕಂದಾಯ ಇಲಾಖೆಯ ಕಛೇರಿಗಳು.

6. ಜಿಲ್ಲೆಯಲ್ಲಿ ಪಾರ್ಕ್/ ಉದ್ಯಾನವನಗಳನ್ನು ಸಾರ್ವಜನಿಕರಿಗೆ ತೆರೆಯಲು ಅವಕಾಶವಿರುವುದಿಲ್ಲ
7. ಘನತ್ಯಾಜ್ಯ ನಿರ್ವಹಣೆ ಸೇರಿದಂತೆ ಆರೋಗ್ಯ ಕ್ಷೇತ್ರಕ್ಕೆ ಸಂಬಂಧಿಸಿದ ಕೌಶಲ್ಯ ತರಬೇತಿಗಳನ್ನು ಅನುಮತಿಸಲಾಗಿದೆ.
8. ಕನ್ನಡಕದ ಅಂಗಡಿಗಳು ಬೆಳಗ್ಗೆ 7.00 ಗಂಟೆಯಿಂದ ಮಧ್ಯಾಹ್ನ 1.00 ಗಂಟೆಯವರೆಗೆ ಕಾರ್ಯಾಚರಿಸಲು ಅನುಮತಿಸಿದೆ.

ಮೇಲಿನ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದೆ. ಈ ಆದೇಶವನ್ನು ಯಾವುದೇ ವ್ಯಕ್ತಿ/ವ್ಯಕ್ತಿಗಳು ಉಲ್ಲಂಘಿಸಿದ್ದಲ್ಲಿ ಅಂತಹವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ-2005 ರ ಕಲಂ 51 ರಿಂದ 60ರ ಅನ್ವಯ,

ಐಪಿಸಿ ಕಲಂ 188 ರಂತೆ ಮತ್ತು ಕರ್ನಾಟಕ ಸಾಂಕ್ರಾಮಿಕ ರೋಗಗಳ ಅಧಿನಿಯಮ 2020ರ ಕಲಂ 4, 5 ಮತ್ತು 10 ರಂತೆ ಕ್ರಮ ಜರುಗಿಸಲಾಗುವುದು.

ಈ ಆದೇಶವನ್ನು ದಿನಾಂಕ: 20-06-2021 ರಂದು ನನ್ನ ಸ್ವಹಸ್ತಾಕ್ಷರ ಮತ್ತು ಮುದ್ರೆಯೊಂದಿಗೆ ಹೊರಡಿಸಲಾಗಿದೆ.

DISTRICT MAGISTRATE D.K.
GOVT. OF KARNATAKA
ಜಿಲ್ಲಾ ದಂಡಾಧಿಕಾರಿ ದ.ಕ.

20/06/2021

ಡಾ. ರಾಜೇಂದ್ರ ಕೆ.ವಿ., ಭಾಆಸೇ
ಜಿಲ್ಲಾಧಿಕಾರಿ, ಜಿಲ್ಲಾ ದಂಡಾಧಿಕಾರಿ
ಹಾಗೂ ಅಧ್ಯಕ್ಷರು,
ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

# ಅನುಬಂಧ -A

ರಾತ್ರಿ ಕರ್ಫ್ಯೂಗೆ ಮಾರ್ಗಸೂಚಿಗಳು:

1) ಅತ್ಯವಶ್ಯಕ ಚಟುವಟಿಕೆಗಳನ್ನು ಹೊರತುಪಡಿಸಿ ರಾತ್ರಿ 7.00 ಗಂಟೆಯಿಂದ ಬೆಳಗ್ಗೆ 7.00 ಗಂಟೆಯವರೆಗೆ ಜನಸಂಚಾರವನ್ನು ಕಟ್ಟುನಿಟ್ಟಾಗಿ ನಿರ್ಬಂಧಿಸಿದೆ.
2) ತುರ್ತು ಸಂದರ್ಭಗಳಲ್ಲಿ ರೋಗಿಗಳು ಮತ್ತು ಅವರ ಪರಿಚಾರಕರು / ವ್ಯಕ್ತಿಗಳನ್ನು ಸ್ಥಳಾಂತರಿಸಲು ಅನುಮತಿಸಲಾಗಿದೆ.
3) ರಾತ್ರಿಯಲ್ಲಿ ಕಾರ್ಯಾಚರಣೆ ಅಗತ್ಯವಿರುವ ಎಲ್ಲಾ ಕೈಗಾರಿಕೆಗಳು / ಕಂಪನಿಗಳಿಗೆ ಕಾರ್ಯನಿರ್ವಹಿಸಲು ಅನುಮತಿಸಿದೆ. ಅಂತಹ ಸಂಸ್ಥೆಗಳ ನೌಕರರು, ತಮ್ಮ ಗುರುತಿನ ಚೀಟಿಯನ್ನು ತೋರಿಸಿ ಸಂಚರಿಸಬಹುದಾಗಿರುತ್ತದೆ.
4) ಟೆಲಿಕಾಂ ಮತ್ತು ಇಂಟರ್ನೆಟ್ ಸೇವೆಯ ನೌಕರರು ಮತ್ತು ವಾಹನಗಳಿಗೆ ಆಯಾ ಸಂಸ್ಥೆ / ಸಂಸ್ಥೆ ನೀಡುವ ಗುರುತಿನ ಚೀಟಿಯನ್ನು ತೋರಿಸಿ ಸಂಚರಿಸಬಹುದಾಗಿರುತ್ತದೆ. ಐಟಿ ಮತ್ತು ಐಟಿಇಎಸ್ ಕಂಪನಿಗಳು / ಸಂಸ್ಥೆಯ ಅಗತ್ಯ ಸಿಬ್ಬಂದಿ / ನೌಕರರು ಮಾತ್ರವೇ ಕಚೇರಿಯಿಂದ ಕಾರ್ಯನಿರ್ವಹಿಸುವುದು. ಉಳಿದಂತೆ ಮನೆಯಿಂದಲೇ ಕಾರ್ಯನಿರ್ವಹಿಸುವುದು.
5) ಔಷಧಾಲಯಗಳು ಸೇರಿದಂತೆ ವೈದ್ಯಕೀಯ, ತುರ್ತು ಮತ್ತು ಅಗತ್ಯ ಸೇವೆಗಳು ಸಂಪೂರ್ಣವಾಗಿ ಕಾರ್ಯನಿರ್ವಹಿಸುತ್ತವೆ ಮತ್ತು ಇತರ ವಾಣಿಜ್ಯ ಚಟುವಟಿಕೆಗಳನ್ನು ನಿಷೇಧಿಸಲಾಗಿದೆ.
6) ಟ್ರಕ್‌ಗಳು, ಸರಕು ವಾಹನಗಳು ಅಥವಾ ಖಾಲಿ ವಾಹನಗಳು ಸೇರಿದಂತೆ ಯಾವುದೇ ಸರಕುಗಳ ಚಲನೆಗೆ ಯಾವುದೇ ನಿರ್ಬಂಧವಿರುವುದಿಲ್ಲ. ವಸ್ತುಗಳ ಹೋಂ ಡೆಲಿವರಿ ಸೇವೆಗಳು ಮತ್ತು ಇ-ಕಾಮರ್ಸ್ ಕಂಪನಿಗಳ ಕಾರ್ಯಾಚರಣೆಯನ್ನು ಅನುಮತಿಸಲಾಗಿದೆ.
7) ರೈಲುಗಳು ಮತ್ತು ವಿಮಾನ ಪ್ರಯಾಣಕ್ಕೆ ಅನುಮತಿ ಇದೆ. ವಿಮಾನ ನಿಲ್ದಾಣಗಳು, ಬಸ್ ಟರ್ಮಿನಲ್‌ಗಳು / ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳು ಇತ್ಯಾದಿಗಳಿಗೆ ಸಾರ್ವಜನಿಕ ಸಾರಿಗೆ, ಖಾಸಗಿ ವಾಹನಗಳು ಮತ್ತು ಟ್ಯಾಕ್ಸಿಗಳ ಚಲನೆ, ವಿಮಾನ, ರೈಲು ಮತ್ತು ರಸ್ತೆಯ ಮೂಲಕ ಪ್ರಯಾಣದ ದಾಖಲೆಗಳು/ ಟಿಕೆಟ್‌ಗಳನ್ನು ತೋರಿಸಿ ಸಂಚರಿಸಲು ಅವಕಾಶವಿದೆ.

ಡಾ. ರಾಜೇಂದ್ರ ಕೆ.ವಿ, ಭಾ.ಆ.ಸೇ
ಜಿಲ್ಲಾಧಿಕಾರಿ, ಜಿಲ್ಲಾ ದಂಡಾಧಿಕಾರಿ
ಹಾಗೂ ಅಧ್ಯಕ್ಷರು,
ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

## ಅನುಬಂಧ-B

**ವಾರಾಂತ್ಯದ ಕರ್ಫ್ಯೂಗಾಗಿ ಮಾರ್ಗಸೂಚಿಗಳು**

**ಈ ಕೆಳಗಿನ ಅಗತ್ಯ ಮತ್ತು ತುರ್ತು ಚಟುವಟಿಕೆಗಳನ್ನು ಹೊರತುಪಡಿಸಿ, ಶುಕ್ರವಾರ ಸಂಜೆ 7.00 ಗಂಟೆಯಿಂದ ಸೋಮವಾರ ಬೆಳಿಗ್ಗೆ 7.00ಗಂಟೆಯವರೆಗೆ ವ್ಯಕ್ತಿಗಳ ಚಲನೆಯನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ:**

1. ಎಲ್ಲಾ ರಾಜ್ಯ ಮತ್ತು ಕೇಂದ್ರ ಸರ್ಕಾರದ ಕಚೇರಿಗಳು ಮತ್ತು ಅವುಗಳ ಸ್ವಾಯತ್ತ ಸಂಸ್ಥೆಗಳು, ನಿಗಮಗಳು, ತುರ್ತು, ಅಗತ್ಯ ಸೇವೆಗಳು ಮತ್ತು ಕೋವಿಡ್ 19 ಕಂಟೈನ್‌ಮೆಂಟ್ ಮತ್ತು ನಿರ್ವಹಣೆ ಕರ್ತವ್ಯಗಳ ನಿರ್ವಹಣೆಗೆ ಅನುಮತಿಯಿರುತ್ತದೆ ಮತ್ತು ಕರ್ತವ್ಯನಿರತ ಅಧಿಕಾರಿಗಳು / ಸಿಬ್ಬಂದಿಗೆ ಅನಿಯಂತ್ರಿತ ಚಲನೆಯನ್ನು ಅನುಮತಿಸಲಾಗಿದೆ.
2. ತುರ್ತು ಮತ್ತು ಅಗತ್ಯ ಸೇವೆಗಳೊಂದಿಗೆ ವ್ಯವಹರಿಸುವ ಮತ್ತು 24/7 ಕಾರ್ಯಾಚರಣೆಗಳ ಅಗತ್ಯವಿರುವ ಎಲ್ಲಾ ಕೈಗಾರಿಕೆಗಳು / ಕಂಪನಿಗಳು / ಸಂಸ್ಥೆಗಳು ಕಾರ್ಯನಿರ್ವಹಿಸಲು ಅನುಮತಿ ನೀಡಲಾಗಿದೆ. ಅಂತಹ ಸಂಸ್ಥೆಗಳ ನೌಕರರು, ತಮ್ಮ ಗುರುತಿನ ಚೀಟಿಯನ್ನು ತೋರಿಸಿ ಸಂಚರಿಸಬಹುದಾಗಿರುತ್ತದೆ. ಆದಾಗ್ಯೂ, ಸಾಧ್ಯವಾದಷ್ಟು ಮಟ್ಟಿಗೆ, ನೌಕರರನ್ನು ಮನೆಯಿಂದ ಕೆಲಸ ಮಾಡಲು ಪ್ರೋತ್ಸಾಹಿಸಬೇಕು.
3. ಟೆಲಿಕಾಂ ಮತ್ತು ಇಂಟರ್ನೆಟ್ ಸೇವೆಯ ನೌಕರರು ಮತ್ತು ವಾಹನಗಳಿಗೆ ಆಯಾ ಸಂಸ್ಥೆ / ಸಂಸ್ಥೆ ನೀಡುವ ಗುರುತಿನ ಚೀಟಿಯನ್ನು ತೋರಿಸಿ ಸಂಚರಿಸಬಹುದಾಗಿರುತ್ತದೆ. ಐಟಿ ಮತ್ತು ಐಟಿಇಎಸ್ ಕಂಪನಿಗಳು / ಸಂಸ್ಥೆಯ ಅಗತ್ಯ ಸಿಬ್ಬಂದಿ / ನೌಕರರು ಮಾತ್ರವೇ ಕಚೇರಿಯಿಂದ ಕಾರ್ಯನಿರ್ವಹಿಸುವುದು. ಉಳಿದಂತೆ ಮನೆಯಿಂದಲೇ ಕಾರ್ಯನಿರ್ವಹಿಸುವುದು.
4. ರೋಗಿಗಳು ಮತ್ತು ಅವರ ಪರಿಚಾರಕರು / ತುರ್ತು ಅಗತ್ಯವಿರುವ ವ್ಯಕ್ತಿಗಳು, ಲಸಿಕೆ ತೆಗೆದುಕೊಳ್ಳಲು ಉದ್ದೇಶಿಸಿರುವ ಅರ್ಹ ಜನರಿಗೆ ಕನಿಷ್ಠ ಪುರಾವೆಗಳೊಂದಿಗೆ ಚಲನೆಯನ್ನು ಅನುಮತಿಸಲಾಗಿದೆ
5. ಕೋವಿಡ್ ಸಮುಚಿತ ವರ್ತನೆಯನ್ನು ಕಟ್ಟುನಿಟ್ಟಾಗಿ ಪಾಲಿಸಿಕೊಂಡು ಬೆಳಿಗ್ಗೆ 7 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಕಾರ್ಯನಿರ್ವಹಿಸಲು ಈ ಕೆಳಕಂಡ ಚಟುವಟಿಕೆಗಳಿಗೆ ಅನುಮತಿಸಿದೆ.
   - ಆಹಾರ, ದಿನಸಿ, ಹಣ್ಣುಗಳು ಮತ್ತು ತರಕಾರಿಗಳು, ಮಾಂಸ ಮತ್ತು ಮೀನು, ಡೈರಿ ಮತ್ತು ಹಾಲಿನ ಬೂತ್‌ಗಳು ಮತ್ತು ಪ್ರಾಣಿಗಳ ಮೇವನ್ನು ಮಾರಾಟ ಮಾಡುವ ಅಂಗಡಿಗಳು.
   - ಬೀದಿಬದಿ ವ್ಯಾಪಾರಸ್ಥರು
   - ಸಾರ್ವಜನಿಕ ವಿತರಣಾ ವ್ಯವಸ್ಥೆಯ ಪಡಿತರ ಅಂಗಡಿಗಳು.
   - ಸ್ವತಂತ್ರ ಮದ್ಯದಂಗಡಿಗಳು ಮತ್ತು ಮಳಿಗೆಗಳು ಪಾರ್ಸೆಲ್ ಕೊಂಡು ಹೋಗಲು ಮಾತ್ರವೇ ಅವಕಾಶ ನೀಡಿದೆ.
6. ರೆಸ್ಟೋರೆಂಟ್, ಹೋಟೇಲ್ ಗಳಿಂದ ತಿನಿಸುಗಳನ್ನು ಮನೆಗೆ ತೆಗೆದುಕೊಂಡು ಹೋಗಲು ಮತ್ತು ಹೋಂ ಡೆಲಿವರಿಗೆ ಮಾತ್ರ ಅನುಮತಿಸಲಾಗುತ್ತದೆ.
7. ರೈಲುಗಳು ಮತ್ತು ವಿಮಾನ ಪ್ರಯಾಣಕ್ಕೆ ಅನುಮತಿ ಇದೆ. ವಿಮಾನ ನಿಲ್ದಾಣಗಳು, ಬಸ್ ಟರ್ಮಿನಲ್ಲುಗಳು / ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳು ಇತ್ಯಾದಿಗಳಿಗೆ ಸಾರ್ವಜನಿಕ ಸಾರಿಗೆ, ಖಾಸಗಿ ವಾಹನಗಳು ಮತ್ತು ಟ್ಯಾಕ್ಸಿಗಳ ಚಲನೆ, ವಿಮಾನ, ರೈಲು ಮತ್ತು ರಸ್ತೆಯ ಮೂಲಕ ಪ್ರಯಾಣದ ದಾಖಲೆಗಳು/ ಟಿಕೆಟ್‌ಗಳನ್ನು ತೋರಿಸಿ ಹಾಗೂ ಕೋವಿಡ್ ಸಮುಚಿತ ವರ್ತನೆಯನ್ನು ಕಟ್ಟುನಿಟ್ಟಾಗಿ ಪಾಲಿಸಿಕೊಂಡು ಸಂಚರಿಸಲು ಅವಕಾಶ ನೀಡಲಾಗಿದೆ.
8. ಕೋವಿಡ್ ಸಮುಚಿತ ವರ್ತನೆಯನ್ನು ಕಡ್ಡಾಯವಾಗಿ ಪಾಲಿಸಿಕೊಂಡು ಈಗಾಗಲೇ ನಿಗದಿಪಡಿಸಿದ ವಿವಾಹಗಳನ್ನು ಆಯಾ ಮನೆಯಲ್ಲಿ ನಿಕಟ ಕುಟುಂಬ ಸಂಬಂಧಿಗಳು ಮಾತ್ರ ಒಳಗೊಂಡು ಗರಿಷ್ಠ 25 ಜನರ ಪರಿಮಿತಿಗೊಳಪಟ್ಟು ನಡೆಸಲು ಅನುಮತಿಸಲಾಗಿದೆ
9. ಕೋವಿಡ್ ಸಮುಚಿತ ವರ್ತನೆಯನ್ನು ಕಡ್ಡಾಯವಾಗಿ ಪಾಲಿಸಿಕೊಂಡು ಗರಿಷ್ಠ 5 ಜನರ ಪರಿಮಿತಿಗೊಳಪಟ್ಟು ಶವಸಂಸ್ಕಾರ / ಅಂತ್ಯಕ್ರಿಯೆಗಳನ್ನು ನಡೆಸಲು ಅನುಮತಿಸಿದೆ.

20/06/2021

ಡಾ. ರಾಜೇಂದ್ರ ಕೆ.ವಿ ಭಾ.ಆ.ಸೇ.
ಜಿಲ್ಲಾಧಿಕಾರಿ, ಜಿಲ್ಲಾ ದಂಡಾಧಿಕಾರಿ
ಹಾಗೂ ಅಧ್ಯಕ್ಷರು ,
ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

ರಿಗೆ:

1. ಪೊಲೀಸ್ ಆಯುಕ್ತರು, ಮಂಗಳೂರು ನಗರ, ಮಂಗಳೂರು-ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ

2. ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು - ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ
3. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ದ.ಕ ಜಿಲ್ಲಾ ಪಂಚಾಯತ್, ಮಂಗಳೂರು--ಇವರಿಗೆಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ
4. ಆಯುಕ್ತರು, ಮಹಾನಗರ ಪಾಲಿಕೆ, ಮಂಗಳೂರು. ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ
5. ಉಪ ಆಯುಕ್ತರು, ಅಬಕಾರಿ ಇಲಾಖೆ, ಮಂಗಳೂರು
6. ಆಯುಕ್ತರು, ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
7. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
8. ಸಹಾಯಕ ಆಯುಕ್ತರು, ಮಂಗಳೂರು/ಪುತ್ತೂರು ಉಪವಿಭಾಗ
9. ಪ್ರಾದೇಶಿಕ ಸಾರಿಗೆ ಅಧಿಕಾರಿ, ಮಂಗಳೂರು / ಪುತ್ತೂರು / ಬಂಟ್ವಾಳ.
10. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
11. ವಿಭಾಗೀಯ ನಿಯಂತ್ರಣಾಧಿಕಾರಿ, ಕೆ.ಎಸ್.ಆರ್.ಟಿ.ಸಿ., ಮಂಗಳೂರು / ಪುತ್ತೂರು.
12. ಸಹಾಯಕ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ, ಮಂಗಳೂರು.
13. ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳಿಗೆ
14. ಎಲ್ಲಾ ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳಿಗೆ
15. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು- ಇವರಿಗೆ ಕಳುಹಿಸುತ್ತಾ ಜಿಲ್ಲೆಯ ಎಲ್ಲಾ ಪ್ರಮುಖ ಸುದ್ದಿ ಮಾಧ್ಯಮಗಳಲ್ಲಿ ಪ್ರಚುರ ಪಡಿಸಲು ತಿಳಿಸಿದೆ.